# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 998 |
| ಸದಸ್ಯರ ಹೆಸರು | ಶ್ರೀ ಡಿ.ಎಸ್. ಅರುಣ್ |
| ಉತ್ತರಿಸುವ ದಿನಾಂಕ | 21-09-2022 |
| ಉತ್ತರಿಸುವವರು | ಮುಜರಾಯಿ, ಹಜ್ ಹಾಗೂ ವಕ್ಫ್ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಾನ್ಯ ಮುಖ್ಯಮಂತ್ರಿಯವರು ಕಳೆದ ಡಿಸೆಂಬರ್-2021ರಂದು ತಿಳಿಸಿದಂತೆ ಧಾರ್ಮಿಕ ದತ್ತಿಯಿಂದ ಹಿಂದೂ ದೇವಾಲಯಗಳನ್ನು ಸ್ವತಂತ್ರಗೊಳಿಸಿ ಭಕ್ತಾಧಿಗಳಿಗೆ ಹಸ್ತಾಂತರಿಸಲು ಉದ್ದೇಶಿಸ ಲಾಗಿದ್ದು, ಪ್ರಸ್ತುತ ಅದರ ಕಾರ್ಯ ರೂಪಕ್ಕೆ ಬಂದಿದೆಯೇ; (ವಿವರ ನೀಡುವುದು) | ಸನ್ಮಾನ್ಯ ಮುಖ್ಯ ಮಂತ್ರಿಯವರು 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-364 ರಲ್ಲಿ "**ದೇವಾಲಯ ಗಳನ್ನು ಸರ್ಕಾರದ ನಿಯಂತ್ರಣದಿಂದ ಮುಕ್ತಗೊಳಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಕೇಳಿ ಬರುತ್ತಿದೆ. ಭಕ್ತಾದಿಗಳ ಈ ಬೇಡಿಕೆಯನ್ನು ಪರಿಗಣಿಸಿ, ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯಗಳಿಗೆ ಸ್ವಾಯತ್ತತೆ ನೀಡಿ, ಅಭಿವೃದ್ಧಿ ಕಾಮಗಾರಿಗಳ ವಿವೇಚನೆಯನ್ನು ದೇವಾಲಯಗಳಿಗೆ ಪ್ರತ್ಯಾಯೋಜಿಸಲು ಕಾನೂನು ಕ್ರಮ ಕೈಗೊಳ್ಳಲಾಗುವುದು**" ಎಂದು ಘೋಷಿಸಲಾಗಿದೆ.<br>ಸದರಿ ಘೋಷಣೆಯಂತೆ ಸರ್ಕಾರದ ಆದೇಶ ಸಂಖ್ಯೆ: ಕಂಇ/141/ ಮುಅಬಿ/ 2022 ದಿನಾಂಕ:12.04.2022 ರಲ್ಲಿ, ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯಗಳಿಗೆ ಸ್ವಾಯತ್ತತೆ ನೀಡಿ, ಅಭಿವೃದ್ಧಿ ಕಾಮಗಾರಿಗಳ ವಿವೇಚನೆಯನ್ನು ದೇವಾಲಯಗಳಿಗೆ ಪ್ರತ್ಯಾಯೋಜಿಸಲು ಕಾನೂನು ಕ್ರಮ ಕೈಗೊಳ್ಳಲು ತಾತ್ವಿಕ ಅನುಮೋದನೆ ನೀಡಲಾಗಿದೆ. |
| ಆ) | ಹಿಂದೂ ದೇವಾಲಯಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉಪಯೋಗಿಸುವ ಹೂಗಳನ್ನು ಸದ್ಬಳಕೆಗಾಗಿ ಉಪ ಉತ್ಪನ್ನಗಳನ್ನಾಗಿ ಉಪಯೋಗಿಸಲು ಸರ್ಕಾರ ಕ್ರಮ ವಹಿಸುವುದೇ ವಹಿಸುವುದಾದಲ್ಲಿ ಈ ಕುರಿತು ಕ್ರಮಗಳೇನು? | ಪ್ರಸ್ತುತ, ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಯಲ್ಲಿ ಬರುವ **ಪ್ರವರ್ಗ "ಎ" ದೇವಾಲಯಗಳಲ್ಲಿ ಪ್ರಥಮ ಹಂತವಾಗಿ 25 ದೇವಾಲಯಗಳಲ್ಲಿ** ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣಾ ಘಟಕಗಳನ್ನು ನಿರ್ಮಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ. ಈ ಯೋಜನೆಯಡಿಯಲ್ಲಿ ಅಧಿಸೂಚಿತ ದೇವಾಲಯಗಳಲ್ಲಿ ಉಪಯೋಗಿಸುವ ಹೂಗಳನ್ನು ಪ್ರತ್ಯೇಕವಾಗಿ ಬೇರ್ಪಡಿಸಿ ದೈವಿಕ ಗೊಬ್ಬರ ತಯಾರಿಕಾ ಕಾರ್ಯ ವಿಧಾನಗಳನ್ನು ಅಳವಡಿಸಿಕೊಳ್ಳಲಾಗಿದೆ. ಈ ರೀತಿ ಉತ್ಪತ್ತಿಯಾದ ಗೊಬ್ಬರವನ್ನು ದೇವಾಲಯಗಳಲ್ಲಿ ತೋಟಗಾರಿಕೆ ಮತ್ತು ಉದ್ಯಾನದ ಗಿಡ-ಮರಗಳಿಗೆ ಉಪಯೋಗಿಸಿಕೊಳ್ಳಲು ಕ್ರಮ ವಹಿಸಿ ಗೊಬ್ಬರವು ಅತ್ಯಧಿಕ ಪ್ರಮಾಣದಲ್ಲಿ ಉತ್ಪತ್ತಿಯಾದಲ್ಲಿ ಅದನ್ನು ಸ್ಥಳೀಯ ರೈತರಿಗೆ ಅಥವಾ ಅಗತ್ಯವಿದ್ದವರಿಗೆ ಮಾರಾಟ ಮಾಡುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಕಂಇ 183 ಮುಸಪ್ರ 2022

(ಶಶಿಕಲಾ. ಅ. ಜೊಲ್ಲೆ)
ಮುಜರಾಯಿ, ಹಜ್ ಹಾಗೂ ವಕ್ಫ್ ಸಚಿವರು